**ಸಿಸಿ ನಂಬರಃ 3074/2024**

**ಪಿ.ಡಬ್ಲ್ಯೂಃ 1**

**ಸತ್ಯ ಪ್ರತಿಜ್ಞೆಯ ಮೇರೆಗೆ, ತಾಃ 10-07-2025**

**(ಸಾಕ್ಷಿಯ ಸ್ವಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆಯಾಗಿ ಪರಿಗಣಿಸಲಾಗಿರುತ್ತದೆ)**

**ಮುಂದುವರೆದ ಮುಖ್ಯ ವಿಚಾರಣೆ : ಫಿರ್ಯಾದುದಾರರ ಪರ ಶ್ರೀ ಎಸ್.ಕೆ.ಎನ್. ವಕೀಲರಿಂದ.**

ಆರೋಪಿ ಕೊಟ್ಟ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕಿನ ಚೆಕ್ಕ ಸಂಖ್ಯೆ 703614 ನ್ನು ಚೆಕ್ಕನ್ನು ಹಾಜರುಪಡಿಸಿದ್ದು ಅದನ್ನು ನಿಪಿ–1 ಎಂದು, ಚೆಕ್‌ನಲ್ಲಿರುವ ಆರೋಪಿಯ ಸಹಿಯನ್ನು ನಿಪಿ–1(ಎ) ಎಂದು, ಬ್ಯಾಂಕಿನ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ–2 ಎಂದು, ಆರೋಪಿಗೆ ವಕೀಲರ ಮೂಲಕ ಕೊಟ್ಟ ನೋಟೀಸಿನ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ–3, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ–4 ಎಂದು, ಆರೋಪಿ ಕಳುಹಿಸಿದ ನೋಟಿಸು ಆತ ಸ್ವೀಕರಿಸದೇ ವಾಪಸ್ಸು ಬಂದಿರುವ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ–5 ಎಂದು, ಸದ್ರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಿ ಅದನ್ನು ನಿಪಿ–5(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲಿಗೆ ಆರೋಪಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.**

**(ನನ್ನ ಹೇಳಿಕೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**ಸಹಿ ಇದೆ.**

**ಹೆಚ್ಚುವರಿ ನ್ಯಾ.ದಂ., ಭಟ್ಕಳ**